All India Radio: Bangalore
National Bulletin In Kannada
12.10.2026  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

- ಭಾರತದ ಪ್ರಗತಿಗೆ ಸಂಸ್ಕೃತಿ, ವಿಜ್ಞಾನ ಮತ್ತು ಆಧುನಿಕ ಮೂಲಸೌಕರ್ಯದಿಂದ ಶಕ್ತಿ - ಪ್ರಧಾನಿ ನರೇಂದ್ರ ಮೋದಿ
- ಶಾಂತಿಯುತವಾಗಿ ಒಂದೆಡೆ ಸೇರುವ ಜನರನ್ನು ಅಕ್ರಮವಾಗಿ ಬಂಧಿಸದಿರಲು ಆಡಳಿತಗಳಿಗೆ ಸುಪ್ರೀಂಕೋರ್ಟ್ ಸೂಚನೆ
- ರಿಯಾದ್ ವಿಮಾನ ನಿಲ್ದಾಣ ದಾಳಿಯಲ್ಲಿ ಗಾಯಗೊಂಡಿದ್ದ ಭಾರತೀಯ ಪ್ರಜೆ ಸಾವು : ಮೃತರ ಕುಟುಂಬಕ್ಕೆ ರಾಯಭಾರ ಕಚೇರಿ ಸಂತಾಪ
- ರಷ್ಯಾ-ಉಕ್ರೇನ್ ಇಂಧನ ಕದನ ವಿರಾಮ ಒಪ್ಪಂದ ; ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ
- ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿ ; ೩ನೇ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತಕ್ಕೆ ೧೪ ರನ್ ಜಯ

<><><><>

ಭಾರತದ ಪ್ರಗತಿಯು ತನ್ನ ಶ್ರೀಮಂತ ಸಾಂಸ್ಕೃತಿಕ ಪರಂಪರೆ, ವೈಜ್ಞಾನಿಕ ಸಾಧನೆಗಳು ಮತ್ತು ಆಧುನಿಕ ಮೂಲಸೌಕರ್ಯಗಳಿಂದ ಶಕ್ತಿ ಪಡೆಯುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ. ಚೆನ್ನೈನ ಐಐಟಿ-ಮದ್ರಾಸ್‌ನಲ್ಲಿ ನಡೆದ ಸಮಾರಂಭದಲ್ಲಿ ತಮಿಳುನಾಡಾದ್ಯಂತ ೧೩ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅವರು ಶಂಕುಸ್ಥಾಪನೆ ನೆರವೇರಿಸಿ, ರಾಷ್ಟ್ರಕ್ಕೆ ಲೋಕಾರ್ಪಣೆಗೊಳಿಸಿ ಮಾತನಾಡಿದರು. ರಸ್ತೆ ಮತ್ತು ರೈಲು ಸಾರಿಗೆ, ಬಂದರು ಮೂಲಸೌಕರ್ಯ, ಪೆಟ್ರೋಲಿಯಂ ಹಾಗೂ ವೈಜ್ಞಾನಿಕ ಸಂಶೋಧನೆಗೆ ಸಂಬಂಧಿಸಿದ ಯೋಜನೆಗಳು ಇದರಲ್ಲಿ ಸೇರಿವೆ. ಕಾರ್ಯಕ್ರಮಕ್ಕೂ ಮುನ್ನ, ಸುಮಾರು ೪ ಸಾವಿರದ ೬೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಚೆನ್ನೈ ಮೆಟ್ರೋ ರೈಲು ಯೋಜನೆಯ ಎರಡನೇ ಹಂತದ ಪೂನಮಲ್ಲೆ-ವಡಪಳನಿ ಮಾರ್ಗವನ್ನು ಪ್ರಧಾನಿ ಉದ್ಘಾಟಿಸಿದರು. ಇದೇ ವೇಳೆ ಚೆನ್ನೈನ ಜೈಗೋಪಾಲ್ ಗರೋಡಿಯಾ ಹಿಂದೂ ವಿದ್ಯಾಲಯದ ಸುವರ್ಣ ಮಹೋತ್ಸವ ಸಮಾರಂಭದಲ್ಲೂ ಅವರು ಭಾಗವಹಿಸಿದ್ದರು. ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿಯವರು, ಭಾರತದ ಉತ್ಪಾದನಾ ವಲಯದ ಬೆಳವಣಿಗೆಯನ್ನು ಶ್ಲಾಘಿಸಿದರು. ಈ ವಲಯದ ವಿಸ್ತರಣೆಯು ಯುವಜನತೆಗೆ ನೇರ ಮತ್ತು ಪರೋಕ್ಷ ಉದ್ಯೋಗಾವಕಾಶಗಳನ್ನು ಸೃಷ್ಟಿಸಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದರು.

<><><><>

ಶಾಂತಿಯುತವಾಗಿ ಒಂದೆಡೆ ಸೇರುವ ಜನರನ್ನು ಅಕ್ರಮವಾಗಿ ಬಂಧಿಸಬಾರದು ಹಾಗೂ ಸಂಚಾರ ನಿಯಮಗಳಿಗೆ ಅನುಗುಣವಾಗಿ ಜನರ ಮುಕ್ತ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ಸಂಬಂಧಿತ ಆಡಳಿತಗಳಿಗೆ ಸುಪ್ರೀಂಕೋರ್ಟ್ ನಿರ್ದೇಶನ ನೀಡಿದೆ. ದೆಹಲಿಯಲ್ಲಿ ಹಾಕಲಾಗಿರುವ ಬ್ಯಾರಿಕೇಡ್ ವ್ಯವಸ್ಥೆಯನ್ನು ಮರುಪರಿಶೀಲಿಸುವಂತೆ ಸೂಚಿಸಿರುವ ನ್ಯಾಯಾಲಯ, ಕಾನೂನು ಮತ್ತು ಸುವ್ಯವಸ್ಥೆಯ ಅವಶ್ಯಕತೆಗಳಿಗೆ ಅನುಗುಣವಾಗಿ ಮೆಟ್ರೋ ಸೇವೆಗಳು ಸಾಮಾನ್ಯ ವೇಳಾಪಟ್ಟಿಯಂತೆ ಕಾರ್ಯ ನಿರ್ವಹಿಸುವುದನ್ನು ಮತ್ತು ಅಂತರ್ಜಾಲ ಸೇವೆಗಳು ತೊಂದರೆಯಿಲ್ಲದೇ ಮುಂದುವರಿಯುವುದನ್ನು ಕೇಂದ್ರ ಸರ್ಕಾರ ಖಚಿತಪಡಿಸಿಬೇಕು ಎಂದು ಸೂಚಿಸಿದೆ. ಇದೇ ವೇಳೆ ವಕೀಲರು ತಮ್ಮ ವೃತ್ತಿಪರ ಕರ್ತವ್ಯಗಳನ್ನು ನಿರ್ವಹಿಸುವುದಕ್ಕೆ ಯಾವುದೇ ರೀತಿ ತಡೆ ಒಡ್ಡ ಬಾರದು ಎಂದು ಸ್ಪಷ್ಟಪಡಿಸಿದರು.

<><><><>

ಸೌದಿ ಅರೇಬಿಯಾದ ರಿಯಾದ್ ನಗರದ ಕಿಂಗ್ ಖಾಲೀದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ನಡೆದ ದಾಳಿಯಲ್ಲಿ ಗಾಯಗೊಂಡಿದ್ದ ಭಾರತೀಯ ಪ್ರಜೆಯೊಬ್ಬರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ರಿಯಾದ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಪ್ರಕಟಿಸಿದೆ. ಕಳೆದ ಶನಿವಾರ ನಡೆದ ಈ ದಾಳಿಯಲ್ಲಿ ಸುಮಾರು ಮುನ್ನೂರು ಮಂದಿ ಗಾಯಗೊಂಡಿದ್ದು, ಅವರಲ್ಲಿ ಹತ್ತು ಮಂದಿ ಭಾರತೀಯರು ಸೇರಿದ್ದಾರೆ. ಗಾಯಾಳುಗಳ ಸ್ಥಿತಿಗತಿ ಬಗ್ಗೆ ಸ್ಥಳೀಯ ಆಡಳಿತ ಮತ್ತು ಆಸ್ಪತ್ರೆ ಅಧಿಕಾರಿಗಳೊಂದಿಗೆ ಭಾರತೀಯ ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದಾರೆ. ಮೃತರ ಕುಟುಂಬಕ್ಕೆ ರಾಯಭಾರ ಕಚೇರಿಯು ತೀವ್ರ ಸಂತಾಪ ಸೂಚಿಸಿದ್ದು, ಪಾರ್ಥಿವ ಶರೀರವನ್ನು ಶೀಘ್ರದಲ್ಲೇ ಸ್ವದೇಶಕ್ಕೆ ರವಾನಿಸುವುದು ಸೇರಿದಂತೆ ಅಗತ್ಯವಿರುವ ಎಲ್ಲಾ ರೀತಿಯ ನೆರವು ನೀಡುವುದಾಗಿ ಭರವಸೆ ನೀಡಿದೆ. ರಿಯಾದ್ ವಿಮಾನ ನಿಲ್ದಾಣದ ದಾಳಿಯ ನಂತರ ಭಾರತೀಯ ರಾಯಭಾರ ಕಚೇರಿಯು ಕೈಗೊಂಡಿರುವ ತುರ್ತು ಕ್ರಮಗಳ ಕುರಿತು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಮಾಹಿತಿ ನೀಡಿದ್ದು, ಎಲ್ಲ ಬೆಳವಣಿಗೆಗಳ ಮೇಲೆ ಗಮನ ವಹಿಸಲಾಗಿದೆ ಎಂದು ತಿಳಿಸಿದ್ದಾರೆ. ಸೌದಿ ಅರೇಬಿಯಾದಲ್ಲಿನ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಅಲ್ಲಿ ನೆಲೆಸಿರುವ ಭಾರತೀಯ ಪ್ರಜೆಗಳು ಎಚ್ಚರಿಕೆಯಿಂದ ಮತ್ತು ಜಾಗರೂಕತೆಯಿಂದ ಇರಬೇಕು ಹಾಗೂ ಅಗತ್ಯವಿದ್ದಲ್ಲಿ ಮಾತ್ರ ಮನೆಯಿಂದ ಹೊರ ಬರಬೇಕೆಂದು ರಾಯಭಾರ ಕಚೇರಿ ಪುನರುಚ್ಚರಿಸಿದೆ. ನಡೆಯುತ್ತಿರುವ ಘಟನೆಗಳಿಗೆ ಸಂಬಂಧಿಸಿದ ಯಾವುದೇ ವೀಡಿಯೊಗಳು ಅಥವಾ ಸುದ್ದಿಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳದಂತೆ ನಾಗರಿಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅಲ್ಲದೆ, ಸ್ಥಳೀಯ ಅಧಿಕಾರಿಗಳು ಅಧಿಕೃತ ಮಾಧ್ಯಮಗಳ ಮೂಲಕ ನೀಡುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಮನವಿ ಮಾಡಲಾಗಿದೆ.

<><><><>

ಈ ನಡುವೆ ಕಿಂಗ್ ಖಾಲೀದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ೨ನೇ ದಾಳಿ ನಡೆದಿದ್ದು, ಒಬ್ಬ ವ್ಯಕ್ತಿ ಮೃತಪಟ್ಟು ೧೧ ಮಂದಿ ಗಾಯಗೊಂಡಿದ್ದಾರೆ. ವಿಮಾನ ನಿಲ್ದಾಣದ ಪ್ರಯಾಣಿಕರ ಟರ್ಮಿನಲ್ ಒಂದಕ್ಕೆ ಕ್ಷಿಪಣಿ ಅಪ್ಪಳಿಸಿದ ಪರಿಣಾಮ ಬೆಂಕಿ ಕಾಣಿಸಿಕೊಂಡಿದೆ ಎಂದು ಸೌದಿ ಮಿಲಿಟರಿ ವಕ್ತಾರರು ತಿಳಿಸಿದ್ದಾರೆ.

ಯೆಮೆನ್‌ನ ಹೌತಿ ಬಂಡುಕೋರರು ಈ ದಾಳಿಯ ಹೊಣೆಯನ್ನು ಹೊತ್ತುಕೊಂಡಿದ್ದು, ಸೌದಿ ಅರೇಬಿಯಾದ ವಿಮಾನ ನಿಲ್ದಾಣಗಳು ಹಾಗೂ ವಾಯುಪ್ರದೇಶವನ್ನು ಬಳಸದಂತೆ ವಿವಿಧ ವಿಮಾನಯಾನ ಸಂಸ್ಥೆಗಳು ಮತ್ತು ಪ್ರಯಾಣಿಕರಿಗೆ ಎಚ್ಚರಿಕೆ ನೀಡಿದ್ದಾರೆ. ಯೆಮೆನ್‌ನಲ್ಲಿ ನಡೆಯುತ್ತಿರುವ ಆಂತರಿಕ ಯುದ್ಧದಲ್ಲಿ ಸರ್ಕಾರಿ ಪಡೆಗಳಿಗೆ ಸೌದಿ ನೀಡುತ್ತಿರುವ ಬೆಂಬಲ ಹಾಗೂ ಸನಾದಲ್ಲಿರುವ ವಿಮಾನ ನಿಲ್ದಾಣದ ಮೇಲೆ ಸೌದಿ ಪಡೆಗಳು ನಡೆಸಿದ ವೈಮಾನಿಕ ದಾಳಿಗೆ ಪ್ರತಿಯಾಗಿ ಈ ಕ್ರಮ ಕೈಗೊಂಡಿರುವುದಾಗಿ ಅವರು ಸಮರ್ಥಿಸಿಕೊಂಡಿದ್ದಾರೆ.

<><><><>

ಹೊರ್ಮುಜ್ ಜಲಸಂಧಿ ಪ್ರದೇಶದಲ್ಲಿ ಮಾರ್ಷಲ್ ದ್ವೀಪಗಳ ಧ್ವಜ ಹೊಂದಿರುವ ಮತ್ತು ೧೧ ಭಾರತೀಯ ನೌಕಾ ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ಎಂ.ಟಿ-ವಾಲ್ಥೆರಾ ಟ್ಯಾಂಕರ್ ಮೇಲೆ ಕ್ಷಿಪಣಿ ದಾಳಿ ನಡೆದಿದ್ದು, ನೌಕೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ನೌಕೆಯಲ್ಲಿದ್ದ ಎಲ್ಲ ೧೧ ಭಾರತೀಯ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ಕೇಂದ್ರ ಬಂದರು, ಹಡಗು, ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೊವಾಲ್ ತಿಳಿಸಿದ್ದಾರೆ. ಇದೇ ವೇಳೆ ಸೋಹಾರ್ ಲಂಗರು ಪ್ರದೇಶದಲ್ಲಿ ೧೧ ಭಾರತೀಯರನ್ನು ಹೊಂದಿದ್ದ ಎಂ.ಟಿ.-ಪೆಟ್ರೋ ಡಾಲ್ಫಿನ್ ಟ್ಯಾಂಕರ್ ಮೇಲೆ ಡ್ರೋನ್ ದಾಳಿ ನಡೆದಿದ್ದು, ಈ ಪೈಕಿ ೯ ಭಾರತ ಸಿಬ್ಬಂದಿಯನ್ನು ಯಶಸ್ವಿಯಾಗಿ ರಕ್ಷಿಸಲಾಗಿದೆ. ಆದರೆ ಇಬ್ಬರು ಭಾರತೀಯ ಪ್ರಜೆಗಳು ಸದ್ಯಕ್ಕೆ ನಾಪತ್ತೆಯಾಗಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ. ಹೊರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ನೌಕೆಗಳ ಮೇಲೆ ನಡೆದಿರುವ ದಾಳಿಗಳನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಖಂಡಿಸಿದೆ.

<><><><>

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಸ್ವಚ್ಛ ಭಾರತ್ ಮಿಷನ್ ಕುರಿತ ಒಂದು ವರದಿ ಇಲ್ಲಿದೆ. ೨೦೧೪ರಲ್ಲಿ ಪ್ರಾರಂಭವಾದ ಸ್ವಚ್ಛ ಭಾರತ್ ಅಭಿಯಾನವು ದೇಶದ ನೈರ್ಮಲ್ಯ ಕ್ಷೇತ್ರವನ್ನು ಕೇವಲ ಸರ್ಕಾರದ ಯೋಜನೆಯಾಗಿ ಉಳಿಸದೆ ಜನಪ್ರಿಯ 'ಜನ ಆಂದೋಲನ'ವನ್ನಾಗಿ ಪರಿವರ್ತಿಸಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನೈರ್ಮಲ್ಯ ಮತ್ತು ನಾಗರಿಕ ಗೌರವಕ್ಕೆ ಆದ್ಯತೆ ನೀಡಲಾಗಿದ್ದು, ದೇಶಾದ್ಯಂತ ೧೨ ಕೋಟಿಗೂ ಹೆಚ್ಚು ಗೃಹ ಶೌಚಾಲಯಗಳನ್ನು ನಿರ್ಮಿಸುವ ಮೂಲಕ ೨೦೧೯ರ ವೇಳೆಗೆ ಭಾರತದ ಗ್ರಾಮಗಳನ್ನು 'ಬಹಿರಂಗ ಶೌಚ ಮುಕ್ತ' ಎಂದು ಘೋಷಿಸಲಾಯಿತು. ೨೦೧೪ರ ಅಕ್ಟೋಬರ್ ೨ರಂದು ಸ್ವತಃ ಪ್ರಧಾನಿಯವರೇ ಕಸಪೊರಕೆ ಹಿಡಿದು ರಸ್ತೆಗಿಳಿದು, ಗಣ್ಯರ 'ಸೇವಾ ಸರಣಿ' ರೂಪಿಸುವ ಮೂಲಕ ಈ ಆಂದೋಲನಕ್ಕೆ ಬಲ ತುಂಬಿದರು. ಈ ಅಭಿಯಾನವು ಕೇವಲ ಶೌಚಾಲಯ ನಿರ್ಮಾಣಕ್ಕೆ ಸೀಮಿತವಾಗದೆ ಸಾರ್ವಜನಿಕ ಆರೋಗ್ಯದಲ್ಲಿ ಬಹುದೊಡ್ಡ ಬದಲಾವಣೆ ತಂದಿದೆ. ೨೦೨೪ರ ಅಧ್ಯಯನದ ಪ್ರಕಾರ, ನೈರ್ಮಲ್ಯ ಸುಧಾರಣೆಯಿಂದಾಗಿ ದೇಶದಲ್ಲಿ ಪ್ರತಿವರ್ಷ ಸುಮಾರು ೭೦ ಸಾವಿರ ನವಜಾತ ಶಿಶುಗಳ ಜೀವ ಉಳಿಯುತ್ತಿದೆ.

ಜೊತೆಗೆ, 'ಸ್ವಚ್ಛತಾ ಸರ್ವೇಕ್ಷಣೆ' ಸ್ಪರ್ಧೆಯು ನಗರಗಳು ಮತ್ತು ಪಟ್ಟಣಗಳಲ್ಲಿ ಸ್ವಚ್ಛತೆ, ತ್ಯಾಜ್ಯ ನಿರ್ವಹಣೆ ಹಾಗೂ ನಾಗರಿಕರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಿದೆ. ಈ ಯೋಜನೆಯು ಶೌಚಾಲಯಗಳನ್ನು ಆರೋಗ್ಯ, ಗೌರವ ಮತ್ತು ಮಾನವ ವಿಕಸನದ ಪ್ರಮುಖ ಸಾಧನಗಳನ್ನಾಗಿ ಪರಿವರ್ತಿಸಿದೆ.

<><><><>

ನಾಲ್ಕೂವರೆ ವರ್ಷಗಳಿಂದ ನಡೆಯುತ್ತಿರುವ ರಷ್ಯಾ-ಉಕ್ರೇನ್ ಯುದ್ಧದಲ್ಲಿ ಎರಡೂ ದೇಶಗಳು ಇಂಧನ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದು, ಇದು ತಕ್ಷಣವೇ ಜಾರಿಗೆ ಬಂದಿದೆ ಎಂದು ತಿಳಿಸಿದ್ದಾರೆ. ರಷ್ಯಾದ ತೈಲ ಮೂಲಸೌಕರ್ಯಗಳ ಮೇಲಿನ ದಾಳಿಯನ್ನು ನಿಲ್ಲಿಸಲು ಉಕ್ರೇನ್ ಸಿದ್ಧವಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಸ್ವಾಗತಿಸಿದ್ದಾರೆ. ಆದರೆ, ಅಧ್ಯಕ್ಷ ಟ್ರಂಪ್ ಅವರ ಘೋಷಣೆಯ ನಂತರವೂ ರಷ್ಯಾ, ಉಕ್ರೇನ್ ಇಂಧನ ಸೌಲಭ್ಯಗಳ ಮೇಲೆ ದಾಳಿ ಮುಂದುವರಿಸಿದೆ ಎಂದು ಅವರು ಆರೋಪಿಸಿದ್ದಾರೆ. ಮಧ್ಯಂತರ ಚುನಾವಣೆಗೂ ಮುನ್ನ ದೇಶೀಯ ಮಾರುಕಟ್ಟೆಯಲ್ಲಿ ಇಂಧನ ಬೆಲೆಯನ್ನು ಇಳಿಸುವ ಉದ್ದೇಶದಿಂದ ಅಧ್ಯಕ್ಷ ಟ್ರಂಪ್ ಈ ಕ್ರಮ ಕೈಗೊಂಡಿದ್ದಾರೆ. ಇರಾನ್ ಯುದ್ಧದ ಪರಿಣಾಮ ಜಾಗತಿಕವಾಗಿ ಡೀಸೆಲ್ ಬೆಲೆ ಏರಿಕೆಯಾಗಿದ್ದು, ರಷ್ಯಾದಿಂದ ಜಾಗತಿಕ ಮಾರುಕಟ್ಟೆಗೆ ಇಂಧನ ಪೂರೈಕೆ ಸುಗಮಗೊಳಿಸಲು ರಷ್ಯಾದ ತೈಲ ಸ್ಥಾವರಗಳ ಮೇಲಿನ ದಾಳಿಯನ್ನು ಸ್ಥಗಿತಗೊಳಿಸುವಂತೆ ಅಧ್ಯಕ್ಷ ಟ್ರಂಪ್ ಉಕ್ರೇನ್ ಮೇಲೆ ಒತ್ತಡ ಹೇರುತ್ತಿದ್ದಾರೆ. ಈ ಕುರಿತು ರಷ್ಯಾದಿಂದ ಯಾವುದೇ ಪ್ರತಿಕ್ರಿಯೆ ಹೊರಬಂದಿಲ್ಲ.

<><><><>

ಇಂದೋರ್‌ನ ಹೋಲ್ಕರ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮೂರನೇ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಭಾರತ, ವೆಸ್ಟ್ ಇಂಡೀಸ್ ತಂಡವನ್ನು ೧೪ ರನ್‌ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ ನಿಗದಿತ ೨೦ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್‌ಗಳನ್ನು ಕಳೆದುಕೊಂಡು ೨೨೩ ರನ್ ಗಳಿಸಿತು. ಅಭಿಷೇಕ್ ಶರ್ಮಾ ೩೦ ಎಸೆತಗಳಲ್ಲಿ ೬೯ ರನ್ ಗಳಿಸಿ ಗಮನಾರ್ಹ ಪ್ರದರ್ಶನ ನೀಡಿದರು. ೨೨೪ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ವೆಸ್ಟ್ ಇಂಡೀಸ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್‌ಗಳ ನಷ್ಟಕ್ಕೆ ೨೦೯ ರನ್ ಗಳಿಸಲಷ್ಟೇ ಶಕ್ತವಾಯಿತು. ಭಾರತದ ಪರ ೩ ವಿಕೆಟ್ ಕಬಳಿಸಿದ ಅರ್ಷದೀಪ್ ಸಿಂಗ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಈ ಗೆಲುವಿನೊಂದಿಗೆ ಭಾರತ ಐದು ಪಂದ್ಯಗಳ ಸರಣಿಯಲ್ಲಿ ೨-೧ರ ಮುನ್ನಡೆ ಸಾಧಿಸಿದೆ. ಸರಣಿಯ ನಾಲ್ಕನೇ ಪಂದ್ಯ ಇದೇ ೧೪ರಂದು ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>